**ಕರ್ನಾಟಕ ಸರ್ಕಾರ**

ಸಂ:ಆಇ 24 ಟಿಎಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ:19/08/2020.

**ಸುತ್ತೋಲೆ**

ವಿಷಯ:-ಸರ್ಕಾರದ ಅಧೀನದಲ್ಲಿರುವ ನಿಗಮ / ಮಂಡಳಿ / ನಿಯಮಿತ /ವಿಶ್ವವಿದ್ಯಾಲಯಗಳು ಮತ್ತು ಇನ್ನಿತರೆ ಸ್ವಾಯತ್ತ ಸಂಸ್ಥೆಗಳ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವಿವರಗಳನ್ನು HRMS ನಲ್ಲಿ ಅಳವಡಿಸಿ ವೇತನಗಳನ್ನು ಸೆಳೆಯುವ ಬಗ್ಗೆ.

****-**

ಸರ್ಕಾರದ ಸುತ್ತೋಲೆ ಸಂಖ್ಯೆ:ಆಇ 06 ಬಿಪಿಇ 2019, ದಿನಾಂಕ:27-09-2019ರ ಸುತ್ತೋಲೆಯಲ್ಲಿ ಆರ್ಥಿಕ ಇಲಾಖೆಯು ಸಂಪೂರ್ಣವಾಗಿ ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆಯಡಿ (HRMS) ದಾಖಲಿಸಿರುವ ಅಂಕಿ ಅಂಶಗಳನ್ನು ಅವಲಂಬಿಸಿ ವೇತನ ಅಂದಾಜು ಮಾಡುವುದರಿಂದ ಸರ್ಕಾರದಿಂದ ಸಹಾಯಾನುದಾನ ಪಡೆಯುವ ಎಲ್ಲಾ ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳು ಮತ್ತು ಇನ್ನಿತರ ಸ್ವಾಯತ್ತ ಸಂಸ್ಥೆಗಳು ಆದೇಶ ಸಂ:ಆಇ 2 ಟಿಎಫ್‌ಪಿ 2020 ದಿ:28.4.2020 ರಲ್ಲಿ ದಿ:30.06.2020 ರೊಳಗಾಗಿ HRMS ಗೆ ಒಳಪಡಬೇಕೆಂದು ನಿರ್ದೇಶನ ನೀಡಲಾಗಿದೆ.

ಸರ್ಕಾರದ ಅಧೀನಕ್ಕೆ ಒಳಪಡುವ ನಿಗಮ/ಮಂಡಳಿ/ನಿಯಮಿತ/ವಿಶ್ವವಿದ್ಯಾಲಯಗಳು ಮತ್ತು ಇನ್ನಿತರ ಸ್ವಾಯತ್ತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ವೇತನಗಳಿಗಾಗಿ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದ್ದರೂ ಸಹಾ HRMS ನಲ್ಲಿ ಸಿಬ್ಬಂದಿ ವಿವರಗಳನ್ನು ದಾಖಲಿಸಲು ಅಗತ್ಯವಿರುವ ಡಿಡಿಓ ಕೋಡಗಳನ್ನು HRMS ನಲ್ಲಿ ಅಳವಡಿಸದೆ ಇರುವ ಕಾರಣ ವೇತನಗಳನ್ನು ಸೆಳೆಯಲು ಸಾಧ್ಯವಾಗುತ್ತಿಲ್ಲವೆಂದು ನಿಗಮ/ಮಂಡಳಿ/ನಿಯಮಿತ/ವಿಶ್ವವಿದ್ಯಾಲಯಗಳು ಮತ್ತು ಇನ್ನಿತರ ಸ್ವಾಯತ್ತ ಸಂಸ್ಥೆಗಳಿಗೆ ಡಿಡಿಓ ತಿಳಿಸುತ್ತಾ, ಅಧಿಕಾರವನ್ನು ನೀಡುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಗಳನ್ನು ಕಳುಹಿಸಲಾಗುತ್ತಿದೆ.

ನಿಗಮ/ಮಂಡಳಿ/ನಿಯಮಿತ/ವಿಶ್ವವಿದ್ಯಾಲಯಗಳು ಕರ್ನಾಟಕ ಸೊಸೈಟಿ ಆ್ಯಕ್ಟ್ ಪ್ರಕಾರ ನೊಂದಾಯಿಸಲ್ಪಟ್ಟಿರುತ್ತದೆ. ಇವುಗಳು ಸರ್ಕಾರದಿಂದ ಸಹಾಯಾನುದಾನ ಪಡೆಯುವ ಸ್ವಾಯತ್ತ ಸಂಸ್ಥೆಗಳಾಗಿದ್ದು, ಇಂತಹ ಸ್ವಾಯತ್ತ ಸಂಸ್ಥೆಗಳು ಖಜಾನೆಯಲ್ಲಿ ಹಣಕಾಸಿನ ಚಟುವಟಿಕೆಗಳನ್ನು ನಡೆಸುವುದಿಲ್ಲ. ಆದ್ದರಿಂದ, ಇದುವರೆಗೆ ಇದ್ದ ಪದ್ಧತಿಯಂತೆ ಸರ್ಕಾರದಿಂದ ಬಿಡುಗಡೆಯಾದ ಅನುದಾನಗಳನ್ನು ಸಂಬಂಧಪಟ್ಟ ಆಡಳಿತ ಇಲಾಖೆ/ಇಲಾಖಾ ಮುಖ್ಯಸ್ಥರಿಂದ ಸ್ವೀಕರ್ತನ ರಸೀದಿ ಮೇಲೆ ಮೇಲು ಸಹಿಯನ್ನು ಪಡೆದು ಖಜಾನೆಯಿಂದ ಸೆಳೆದು ಬ್ಯಾಂಕ್ ಖಾತೆಯಲ್ಲಿಟ್ಟು ನಿರ್ವಹಿಸುತ್ತಿದೆ. ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 17 (ಸಿ) ರನ್ವಯ ಖಜಾನೆರನ್ವಯ ಮಹಾಲೇಖಪಾಲರು ನಿಗಮ/ಮಂಡಳಿ/ವಿಶ್ವವಿದ್ಯಾಲಯಗಳಿಗೆ ಡಿಡಿಓ ಕೋಡ್ ಅನ್ನು ನೀಡಲು ಪ್ರಾಧಿಕಾರ (Authorisation) ನೀಡುವುದಿಲ್ಲ. ಖಜಾನೆಯಲ್ಲಿಯೂ ಮಹಾಲೇಖಪಾಲರ ಪ್ರಾಧಿಕಾರವಿಲ್ಲದೆ ಡಿಡಿಓ ಕೋಡ್ ನೀಡುವುದಿಲ್ಲ.

ಆದರೆ, HRMS ನಲ್ಲಿ ಸಂಸ್ಥೆಗಳು ತಮ್ಮ ಸಿಬ್ಬಂದಿ ವಿವರಗಳನ್ನು ಅನುಕೂಲವಾಗುವಂತೆ ತಂತ್ರಾಂಶದಲ್ಲಿ ಅವಕಾಶವನ್ನು HRMS ನಲ್ಲಿ ಮಾಡಿರುತ್ತಾರೆ. ಅದರನ್ವಯ ಇಂತಹ ಎಲ್ಲಾ ನಿಗಮ/ಮಂಡಳಿ/ಸಂಸ್ಥೆ/ಪ್ರಾಧಿಕಾರ/ವಿಶ್ವವಿದ್ಯಾಲಯಗಳು HRMS ನಲ್ಲಿ ತಮ್ಮ ಸಿಬ್ಬಂದಿ ವಿವರ ದಾಖಲಿಸಿ, ಅವುಗಳ ವಿವರಗಳನ್ನು ಸಂಬಂಧಿಸಿದ ಇಲಾಖೆಯ ಡಿಡಿಓ ರವರಿಗೆ ನೀಡುವಂತೆ (ಈ ಹಿಂದೆ ಪೇಯಿಸ್ ರಸೀದಿ ಮೇಲೆ ಹಣ ಸೆಳೆದು ಸಂಸ್ಥೆಗಳಿಗೆ ಪಾವತಿಸುತ್ತಿದ್ದ ಡಿಡಿಓ ರವರಿಗೆ) ಹಾಗೂ ಇಲಾಖಾ ಡಿ.ಡಿ.ಓ ರವರಿಗೆ, ವೇತನಕ್ಕಾಗಿ ಪಾವತಿಸಬೇಕಾದ ಮೊತ್ತಕ್ಕೆ ಹಿಂದಿನಂತೆಯೇ ಪೇಯಿಸ್ ರಸೀದಿ ಮೇಲೆ ಖಜಾನೆಯಿಂದ ಹಣ ಸೆಳೆದು ಸಂಸ್ಥೆಗಳ ಬ್ಯಾಂಕ್ ಖಾತೆಗೆ ಪಾವತಿಸಬಹುದಾಗಿದೆ.

ಆದರೆ, ಕೆಲವು ನಿಗಮ/ಮಂಡಳಿ/ಸಂಸ್ಥೆ/ವಿಶ್ವವಿದ್ಯಾಲಯಗಳು ಮತ್ತು ಇನ್ನಿತರ ಸ್ವಾಯತ್ತ ಸಂಸ್ಥೆಗಳಲ್ಲಿ ಮುಖ್ಯ ಲೆಕ್ಕಾಧಿಕಾರಿ/ಮುಖ್ಯ ಆಡಳಿತಾಧಿಕಾರಿಯಾಗಿ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಅಧಿಕಾರಿಗಳು ನಿಯೋಜನೆ ಮೇಲಿರುವುದರಿಂದ ಅಂತಹವರಿಗೆ ಡಿಡಿಓ ಅಧಿಕಾರ ನೀಡುವ ಬಗ್ಗೆ ಪರಿಶೀಲಿಸಲು ಅಂತಹ ನೌಕರರ ವಿವರಗಳನ್ನು ಒದಗಿಸುವಂತೆ ಸರ್ಕಾರದಿಂದ ವೇತನ ಸಹಾಯಾನುದಾನ ಪಡೆಯುತ್ತಿರುವ ಎಲ್ಲಾ ನಿಗಮ/ ಮಂಡಳಿ/ಸಂಸ್ಥೆ/ಪ್ರಾಧಿಕಾರ ಮುಂತಾದ ಸ್ವಾಯತ್ತ

ಸಂಸ್ಥೆಗಳಿಗೆ ಸೂಚಿಸಿದೆ. ಅಲ್ಲಿಯವರೆಗೆ ಹಿಂದಿನಂತೆ ಜೂನ್, ಜುಲೈ, ಆಗಸ್ಟ್ 2020 ರ ತಿಂಗಳುಗಳ ವೇತನಗಳನ್ನು ಸೆಳೆಯಲು ಅನುಮತಿ ನೀಡಿದೆ. ಸೆಪ್ಟೆಂಬರ್ ತಿಂಗಳಿನ ವೇತನವನ್ನು HRMS ಮೂಲಕ ಪಡೆಯಲು ಸೂಚಿಸಿದೆ.

17.8.2020
(ಹೆಚ್.ಎ. ಶೋಭ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆನಿ ಮತ್ತು ಬಿಸಿಸಿ).

ಪ್ರತಿಗಳು:-

1. ಮಹಾಲೇಖಪಾಲರು, ಲೆಕ್ಕಪತ್ರಗಳು ಮತ್ತು ಹಕ್ಕುಗಳು, ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5326/5369 ಬೆಂಗಳೂರು.
2. ಮಹಾಲೇಖಪಾಲರು(ಲೆಕ್ಕ ತನಿಖೆ-1), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ ಬೆಂಗಳೂರು.
3. ಮಹಾಲೇಖಪಾಲರು(ಲೆಕ್ಕ ತನಿಖೆ-2), ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ 5329/5369, ಕರ್ನಾಟಕ ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6. ಆಯುಕ್ತರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಎಲ್ಲಾ ನಿಗಮ/ಮಂಡಳಿ/ನಿಯಮಿತ/ವಿಶ್ವವಿದ್ಯಾಲಯಗಳು/ಸಂಘ ಸೊಸೈಟಿಗಳು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು.
10. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
11. ಉಪ ನಿರ್ದೇಶಕರು, ಟಿಎನ್‌ಎಂಸಿ ಖನಿಜ ಭವನ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.